# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 113(1002) |
| ಸದಸ್ಯರ ಹೆಸರು | : | ಡಾ.ಎಂ.ಜಿ.ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 14-03-2025 |
| ಉತ್ತರಿಸುವ ಸಚಿವರು | : | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವಿಶ್ವಗುರು ಬಸವೇಶ್ವರರನ್ನು ಕರ್ನಾಟಕದ ಸಾಂಸ್ಕೃತಿಕ ರಾಯಭಾರಿ ಎಂದು ಸರ್ಕಾರ ಘೋಷಿಸಿದ್ದು, ಇದಕ್ಕೆ ಪೂರಕವಾಗಿ ಸರ್ಕಾರದಿಂದ ಯಾವುದಾದರೂ ಕಾರ್ಯಕ್ರಮಗಳನ್ನು ರೂಪಿಸಲಾಗಿದೆಯೇ; ರೂಪಿಸದಿದ್ದರೆ ಈ ಬಗ್ಗೆ ಸರ್ಕಾರದ ಚಿಂತನೆಯೇನು. | ಸರ್ಕಾರದ ಆದೇಶ ಸಂಖ್ಯೆ: ಕಸಂವಾ 39 ಕಸಧ 2024 ದಿನಾಂಕ:20.01.2024ರಲ್ಲಿ 12ನೇ ಶತಮಾನದ ಸಮಾನತೆಯ ಹರಿಕಾರ ಶ್ರೀ ಜಗಜ್ಯೋತಿ ಬಸವಣ್ಣನವರನ್ನು "ಕರ್ನಾಟಕದ ಸಾಂಸ್ಕೃತಿಕ ನಾಯಕ" ಎಂದು ಘೋಷಿಸಲಾಗಿದ್ದು, ವಿವರವನ್ನು **ಅನುಬಂಧ-1 ರಲ್ಲಿರಿಸಿದೆ.**<br><br>ಇದಕ್ಕೆ ಪೂರಕವಾಗಿ ಜಗಜ್ಯೋತಿ ಬಸವಣ್ಣನವರ ಭಾವಚಿತ್ರ ಅನಾವರಣ ಮತ್ತು ವಚನ ವಿವೇಕ ಕಿರುಹೊತ್ತಿಗೆಯನ್ನು ಸನ್ಮಾನ್ಯ ಮುಖ್ಯಮಂತ್ರಿಗಳು ದಿನಾಂಕ:13.02.2024ರಂದು ಬಿಡುಗಡೆ ಮಾಡಿರುತ್ತಾರೆ.<br><br>2024-25ನೇ ಸಾಲಿನ ಆಯವ್ಯಯ ಘೋಷಣೆಯ ಕಂಡಿಕೆ-346ರಲ್ಲಿ "ಬಸವಣ್ಣನವರ ಬದುಕು, ಸಂದೇಶ ಮತ್ತು ಚಿಂತನೆಯನ್ನು ವ್ಯಾಪಕವಾಗಿ ಪ್ರಚುರಪಡಿಸುವ ನಿಟ್ಟಿನಲ್ಲಿ ಸರ್ವಧರ್ಮ ಸಂಸತ್ ಅನ್ನು ಬಸವ ಜಯಂತಿಯಂದು ಆಯೋಜಿಸಲಾಗುವುದು ಎಂದು ಘೋಷಿಸಲಾಗಿದ್ದು, ಸದರಿ ಆಯವ್ಯಯ ಘೋಷಣೆಯ ಕಂಡಿಕೆ 346ರಲ್ಲಿ ಬಸವಣ್ಣನವರ ಬದುಕು, ಸಂದೇಶ ಮತ್ತು ಚಿಂತನೆಯನ್ನು ವ್ಯಾಪಕವಾಗಿ ಪ್ರಚುರಪಡಿಸುವ ನಿಟ್ಟಿನಲ್ಲಿ ಬಸವ ಜಯಂತಿಯಂದು **"ಸರ್ವಧರ್ಮ ಸಂಸತ್"**ನ್ನು ಆಯೋಜಿಸಲು ಘೋಷಿಸಲಾಗಿದ್ದು, ಸದರಿ ಘೋಷಣೆಯನ್ನು ಅನುಷ್ಠಾನಗೊಳಿಸಲು ಸರ್ಕಾರದ ತಾತ್ವಿಕ ಅನುಮೋದನೆ ಪಡೆಯಲು ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿ, ಆರ್ಥಿಕ ಇಲಾಖೆಯ ಟಿಪ್ಪಣಿ ಸಂ:ಆಇ-530/ ವೆಚ್ಚ-7/2024 ದಿನಾಂಕ:16.05.2024ರಲ್ಲಿ "2024-25ನೇ ಸಾಲಿನ ಬಸವ ಜಯಂತಿಯು 2024ರ ಮೇ-10ರಂದು ಈಗಾಗಲೇ ಮುಗಿದಿರುವುದರಿಂದ, ಮುಂದಿನ ಸಾಲುಗಳಲ್ಲಿ ಬಸವ ಜಯಂತಿಯಂದು ಸರ್ವಧರ್ಮ ಸಂಸತ್ ಅನ್ನು ಇಲಾಖೆಗೆ ಒದಗಿಸಿರುವ ಅನುದಾನದ ಮಿತಿಯೊಳಗೆ ಯಾವ ರೀತಿ ಆಯೋಜಿಸಬಹುದು ಎಂಬ ಬಗ್ಗೆ ಯೋಜನೆಯನ್ನು ರೂಪಿಸಿ ಆರ್ಥಿಕ ಇಲಾಖೆಯನ್ನು ಸಂಪರ್ಕಿಸುವಂತೆ ತಿಳಿಸಿರುತ್ತದೆ.<br><br>ಅದರನ್ವಯ, ಜಿಲ್ಲಾಧಿಕಾರಿ, ಬಾಗಲಕೋಟೆ ಜಿಲ್ಲೆ ಇವರಿಂದ ಕೂಡಲಸಂಗಮದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲು ಪ್ರಸ್ತಾವನೆ ಸ್ವೀಕೃತವಾಗಿದ್ದು, ಆರ್ಥಿಕ ಇಲಾಖೆಯ ಹಿಂಬರಹದಂತೆ ಮುಂದಿನ ಬಸವ ಜಯಂತಿಯಂದು ಕಾರ್ಯಕ್ರಮ ಆಚರಿಸಲು ಪರಿಶೀಲಿಸಲಾಗುತ್ತಿದೆ. |
| ಆ | ಬೀದರ್ ಜಿಲ್ಲೆ ಬಸವಕಲ್ಯಾಣದಲ್ಲಿ ಶರಣರ ವಚನಗಳನ್ನು ಪ್ರಚಾರ ಪಡಿಸಲು ಗಾಯನ, ನಾಟಕ, ಮತ್ತಿತರ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಲು ಸಾಂಸ್ಕೃತಿಕ ಭವನ ಇದೆಯೇ; ಇಲ್ಲದಿದ್ದಲ್ಲಿ ಸಾಂಸ್ಕೃತಿಕ ಭವನ ನಿರ್ಮಿಸಲು ಯೋಜನೆ ಹಾಕಿಕೊಳ್ಳಲಾಗುವುದೇ; | ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ. |

| | | |
|---|---|---|
| ಇ) | ಈ ಸಾಂಸ್ಕೃತಿಕ ಭವನ ನಿರ್ಮಾಣ ಮಾಡಲು ಹಣ ಮೀಸಲಿರಿಸಿ ಯಾವ ಕಾಲಮಿತಿಯೊಳಗೆ ನಿರ್ಮಾಣ ಮಾಡಲಾಗುವುದು? | ಉದ್ಭವಿಸುವುದಿಲ್ಲ. |

ಸಂಖ್ಯೆ: ಕಸಂವಾ 28 ಕವಿಸ 2025.

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಜಗಜ್ಯೋತಿ ಬಸವಣ್ಣನವರನ್ನು ಕರ್ನಾಟಕ ರಾಜ್ಯದ ಸಾಂಸ್ಕೃತಿಕ ರಾಯಭಾರಿಯನ್ನಾಗಿ ಘೋಷಿಸುವ ಬಗ್ಗೆ.

**ಪ್ರಸ್ತಾವನೆ:-**

12ನೇ ಶತಮಾನದಲ್ಲಿ ಕರ್ನಾಟಕದ ಸಾಮಾಜಿಕ ವಲಯದಲ್ಲಿ ಕ್ರಾಂತಿಯೊಂದು ಸಂಭವಿಸಿತು. ನಮ್ಮ ಭಾರತದ ಸಂವಿಧಾನದಲ್ಲಿ ಪ್ರಸ್ತುತ ಎತ್ತಿಹಿಡಿದಿರುವ ಜಾತಿಭೇದವಿಲ್ಲದ, ವರ್ಗ ತಾರತಮ್ಯವಿಲ್ಲದ, ಲಿಂಗ ತಾರತಮ್ಯವಿಲ್ಲದ ಸಮಾಜವನ್ನು ರೂಪಿಸುವ ಕೆಲಸ ಬಸವಣ್ಣನವರ ನೇತೃತ್ವದಲ್ಲಿ ನಡೆಯಿತು.

12ನೇ ಶತಮಾನದಲ್ಲಿ ಕ್ರಾಂತಿಯೋಗಿ, ಜಗಜ್ಯೋತಿ ಬಸವಣ್ಣನವರು ಪ್ರತಿಪಾದಿಸಿದ ಸಾರ್ವತ್ರಿಕ ಮೌಲ್ಯಗಳಾದ ಜಾತಿ ರಹಿತ ಸಮಾಜ, ಕಾಯಕದ ಮಹತ್ವ ಮತ್ತು ವರ್ಗ ರಹಿತ ಸಮಾಜ, ಜೀವನ ಮಾರ್ಗ, ಸಮಾಜದಲ್ಲಿ ಮಹಿಳಾ ಸಮಾನತೆ ಹಾಗೂ ಮೂಢನಂಬಿಕೆಗಳ ಬಗ್ಗೆ ವಿರೋಧ ವ್ಯಕ್ತಪಡಿಸಿರುತ್ತಾರೆ. ಅಲ್ಲದೇ ಜಗಜ್ಯೋತಿ ಬಸವಣ್ಣನವರು ಸಾರ್ವತ್ರಿಕ ಮತ್ತು ಸಾರ್ವಕಾಲಿಕ ಸರ್ವಜನ ಸಮಾಭಾವದ ತಾತ್ವಿಕತೆಗಳ ಮೂಲಕ ಕಲ್ಯಾಣ ಸಮಾಜವನ್ನು ಕಟ್ಟುವುದಕ್ಕೆ ಬೇಕಾದ ನೀತಿಯನ್ನು ಬೋಧಿಸಿರುವುದರಿಂದ ನಮ್ಮ ದೇಶದ ಸಂವಿಧಾನದ ಆಶಯಗಳಿಗೆ ಅನುರೂಪವಾದ ಅವರ ಚಿಂತನೆಗಳು ಬಸವಣ್ಣನವರ ಸಾಂಸ್ಕೃತಿಕ ರಾಯಭಾರಿತ್ವಕ್ಕೆ ಸಮರ್ಥನೀಯವಾದ ನೆಲೆ ಒದಗಿಸಿವೆ. ಈ ಹಿನ್ನಲೆಯಲ್ಲಿ, ಜಗಜ್ಯೋತಿ ಬಸವಣ್ಣನವರನ್ನು ಕರ್ನಾಟಕ ರಾಜ್ಯದ ಸಾಂಸ್ಕೃತಿಕ ನಾಯಕರವರನ್ನಾಗಿ ಘೋಷಿಸಲು ಉದ್ದೇಶಿಸಲಾಗಿದೆ.

ಅದರಂತೆ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 39 ಕಸಧ 2024,**
**ಬೆಂಗಳೂರು, ದಿನಾಂಕ: 20-01-2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 12ನೇ ಶತಮಾನದಲ್ಲಿ ಕ್ರಾಂತಿಯೋಗಿ ಜಗಜ್ಯೋತಿ ಬಸವಣ್ಣನವರು ಪ್ರತಿಪಾದಿಸಿದ ಸಾರ್ವತ್ರಿಕ ಮೌಲ್ಯಗಳು, ಸಾರ್ವತ್ರಿಕ ಮತ್ತು ಸಾರ್ವಕಾಲಿಕ, ಸರ್ವಜನ ಸಮಾಭಾವದ ತಾತ್ವಿಕತೆಗಳ ಮೂಲಕ ಕಲ್ಯಾಣ ಸಮಾಜವನ್ನು ಕಟ್ಟುವುದಕ್ಕೆ ಬೇಕಾದ ನೀತಿಯನ್ನು ಬೋಧಿಸಿರುವುದರಿಂದ **ಶ್ರೀ ಜಗಜ್ಯೋತಿ ಬಸವಣ್ಣನವರನ್ನು "ಕರ್ನಾಟಕದ ಸಾಂಸ್ಕೃತಿಕ ನಾಯಕ"** ಎಂದು ಘೋಷಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
S. Geetha 20/1/2024
**(ಎಸ್.ಗೀತಾಬಾಯಿ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ
(ಸಂಸ್ಕೃತಿ)
20/1/24

**ಇವರಿಗೆ:-**

1. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.

2. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು.
5. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
6. ಸರ್ಕಾರದ ಉಪ ಕಾರ್ಯದರ್ಶಿಗಳು, ಸಚಿವ ಸಂಪುಟ ಶಾಖೆ(ವಿಷಯ ಸೂಚಿ: ಸಿ:57/2024ಕ್ಕೆ ಕೈಗೊಂಡ ಕ್ರಮದ ಅನುಸರಣಾ ವರದಿ)
7. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ.
9. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಶಾಖೆ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ.
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.